ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

ಕೊಳ್ಳೇಗಾಲ: 03-02-2026 ರಂದು ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಗಣಕ ವಿಜ್ಞಾನ ವಿಭಾಗದ ವತಿಯಿಂದ ಒರಿಯಂಟೇಶನ್ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಮೈಸೂರಿನ ಲೆಟ್ಸ್ ಪ್ರೊ ಅಕಾಡೆಮಿಯ ಶ್ರೀಮತಿ ತನುಷನಂದಿಶ್, ಶ್ರೀ ಅನುಪ್ ಕೆ.ವಿ ಹಾಗು ಶ್ರೀ ವಿವೇಕ್ ರವರು ಆಗಮಿಸಿದ್ದರು. ವಿದ್ಯಾರ್ಥಿಗಳಿಗೆ ಯೊಜನೆಗಳು ಮತ್ತು ಇಂಟರ್ನ್‌ಶಿಪ್‌ಗಳ ಮಹತ್ವವನ್ನು ತಿಳಿಸುವುದು ಕಾರ್ಯಕ್ರಮದ ಉದ್ದೇಶವಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಶ್ರೀಮತಿ ತನುಷ ನಂದೀಶ್‌ರವರು ಮಾತನಾಡಿ ವಿದ್ಯಾರ್ಥಿಗಳು ತಮ್ಮ ಆಸಕ್ತಿಗೆ ಅನುಗುಣವಾಗಿ ಯೋಜನೆಗಳನ್ನು ಹೇಗೆ ಆಯ್ಕೆ ಮಾಡಿಕೊಳ್ಳಬೇಕು ಹಾಗೂ ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಜ್ಞಾನದ ಜೊತೆಗೆ ಕೌಶಲ್ಯಗಳು ಬಹಳ ಮುಖ್ಯ ಎಂಬುದನ್ನು ತಿಳಿಸಿದರು.

ಶ್ರಿ ಅನುಪ್ ರವರು ಮಾತನಾಡಿ ವಿದ್ಯಾರ್ಥಿಗಳು ಯೋಜನೆಗಳ ಮೂಲಕ ನೈಜ ಸಮಸ್ಯೆಗಳನ್ನು ಹೇಗೆ ಪರಿಹರಿಸುವುದು ಎಂಬುದನ್ನು ತಿಳಿದು, ವಿದ್ಯಾರ್ಥಿಗಳು ಇಟರ್ನ್‌ಶಿಪ್‌ಗಳ ಮೂಲಕ ಕೆಲಸದ ಅನುಭವ ಪಡೆಯಬಹುದು, ಕಂಪನಿಗಳ ಕೆಲಸದ ವಾತಾವರಣವನ್ನು ಅರಿತು ಕೊಳ್ಳಬಹುದು ಹಾಗೂ ಭವಿಷ್ಯದ ಉದ್ಯೋಗಕ್ಕೆ ತಯಾರಾಗಬಹುದು ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ವಿವೇಕ್‌ರವರು ಮಾತನಾಡಿ ಸಮಯವನ್ನು ಹೇಗೆ ಉಪಯೋಗಿಸಿಕೊಳ್ಳಬೇಕು ಹಾಗೂ ಸ್ವತಂತ್ರವಾಗಿ ಬದುಕುವುದನ್ನು ಕಲಿತು ತಮ್ಮ ವೈಯಕ್ತಿಕ ಕೆಲಸಗಳನ್ನು ನಿರ್ವಹಿಸಬೇಕು ಎಂದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು ವಿದ್ಯಾರ್ಥಿಗಳ ಭವಿಷಯ್ಯದಲ್ಲಿ ಉದ್ಯೋಗ ಪಡೆಯಲು ಜ್ಞಾನವಂತರಾಗಿರುವುದು ಪ್ರಾಯೋಗಿಕ ಜ್ಞಾನ ಮುಖ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗಣಕ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಶ್ರೀಮತಿ. ಕೆ ಎನ್ ನಾಗವೇಣಿ, ವಿಭಾಗದ ಅಧ್ಯಾಪಕರುಗಳು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದರು.

ಒರಿಯಂಟೇಶನ್ ಕಾರ್ಯಕ್ರಮ ಉದ್ಘಾಟನೆ. ಚಿತ್ರದಲ್ಲಿ  ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ವಿವೇಕ್, ಶ್ರೀಮತಿ ತನುಷನಂದೀಶ್, ಶ್ರೀ ಅನುಪ್ ಕೆ.ವಿ, ಪ್ರಾಚಾರ್ಯರಾದ ಡಾ.ಹೆಚ್ ಎಸ್ ಕೊಂಗಳಪ್ಪ, ಶ್ರೀಮತಿ ನಾಗವೇಣಿ ಕಾಣಬಹುದು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿರುವ ಡಾ.ಹೆಚ್ ಎಸ್ ಕೊಂಗಳಪ್ಪರವರು ವಿದ್ಯಾರ್ಥಿಗಳನ್ನು ಕುರಿತು ಮಾತನಾಡುತ್ತಿರುವುದು.

